# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 144
ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ|| ಉಮಾಶ್ರೀ (ನಾಮನಿರ್ದೇಶಿತರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 08.12.2025
ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ಪಡಿತರ ಚೀಟಿಗಳನ್ನು ಅನರ್ಹ ಎಂದು ಸರ್ಕಾರ ಗುರುತಿಸಲಾಗಿದೆ?</td><td>ರಾಜ್ಯದಲ್ಲಿ ದಿನಾಂಕ: 28.11.2025 ರವರೆಗೆ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿರುತ್ತದೆ.
<table>
<tr><th>ಪಡಿತರ ಚೀಟಿ ವಿಧ</th><th>ಪಡಿತರ ಚೀಟಿಗಳ ಸಂಖ್ಯೆ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿ</td><td>10,53,626</td><td>43,13,141</td></tr>
<tr><td>ಆದ್ಯತಾ ಪಡಿತರ ಚೀಟಿ (PHH)</td><td>1,14,10,557</td><td>4,00,57,222</td></tr>
<tr><td>ಆದ್ಯತೇತರ ಪಡಿತರ ಚೀಟಿ (NPHH)</td><td>28,86,530</td><td>98,78,464</td></tr>
<tr><td>ಒಟ್ಟು</td><td>1,53,51,013</td><td>5,42,48,827</td></tr>
</table>
ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.<br>
1. CBDT Income Group Annual Income > 1,20,000<br>
2. GSTN Gross Turnover >25 Lacs<br>
3. MCA Individual as Director<br>
4. PDS Duplicate RC Inter State<br>
5. PDS Duplicate RC Intra State<br>
6. PDS RC Member Above 100 Years<br>
7. PDS Silent RC >12 Months<br>
8. PDS Silent RC 6-12 Months<br>
9. PDS Single Member Below 18 Years<br>
10. PM KISAN Land Holding >7.5 Acres<br>
11. UIDAI Aadhaar Status Deceased</td></tr>
</table>

| | | |
|---|---|---|
| | | **12. Vehicle Ownership value Owning LIGHT MOTOR VEHICLE**<br>**13. Vehicle Ownership value Owning MEDIUM MOTOR VEHICLE**<br>**14. Vehicle Ownership value Owning OTHER THAN MENTIONED ABOVE**<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಸದರಿ ಮಾನದಂಡಗಳ ವಿರುದ್ಧವಾಗಿ ಪಡೆದಿರುವ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆಹಚ್ಚಿ ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿರುತ್ತದೆ. |
| ಆ | ರಾಜ್ಯದಲ್ಲಿ 2025-26ನೇ ಸಾಲಿನಲ್ಲಿ ಪಡಿತರ ಚೀಟಿ ಪಡೆಯಲು ಎಷ್ಟು ಅರ್ಜಿಗಳು ಹೊಸದಾಗಿ ಸ್ವೀಕೃತಗೊಂಡಿದೆ? ಅವುಗಳನ್ನು ಯಾವ ಕಾಲಮಿತಿಯೊಳಗೆ ಅನುಮೋದನೆಗೊಳಿಸುವುದು; | ರಾಜ್ಯದಲ್ಲಿ ದಿನಾಂಕ: 27.11.2025 ರ ಅಂತ್ಯಕ್ಕೆ ಆದ್ಯತಾ ಪಡಿತರ ಚೀಟಿ ಕೋರಿ ಒಟ್ಟು 3,22,468 ಅರ್ಜಿಗಳು ಸ್ವೀಕೃತವಾಗಿರುತ್ತದೆ. ಸದರಿ ಅರ್ಜಿಗಳು ಪರಿಶೀಲನೆ ಕಾರ್ಯ ಪ್ರಗತಿಯಲ್ಲಿರುತ್ತದೆ |
| ಇ | ಈಗಾಗಲೇ ಅನರ್ಹಗೊಂಡವರು ಮತ್ತೆ ಪಡಿತರ ಚೀಟಿಯನ್ನು | ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧ ಪಟ್ಟ ತಾಲ್ಲೂಕಿನ |

| | | |
|---|---|---|
| | ಪಡೆಯಲು ಹೊಸದಾಗಿ ಅರ್ಜಿಗಳನ್ನು ಸಲ್ಲಿಸಿದ್ದಾರೆಯೇ? ಸಲ್ಲಿಸಿದ್ದಲ್ಲಿ ಇದುವರೆಗೂ ಎಷ್ಟು ಅರ್ಜಿಗಳು ಸ್ವೀಕೃತಗೊಂಡಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) | ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ನಿಯಮಾನುಸಾರ ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸಲು ಕ್ರಮವಹಿಸಲಾಗುತ್ತದೆ. |

ಇ-ಆನಾಪ 308 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು